**.ಎಸ್.ಸಿ ನಂ.9/2025 ಪಿ.ಡಬ್ಲ್ಯೂ- 1(ಗುರುಮೂರ್ತಿ)**

**ಸಾಕ್ಷಿಯನ್ನು ದಿನಾಂಕ 28.02.2026 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿ ಪರ ವಕೀಲರಿಂದಃ**

ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದು, ಅದರಲ್ಲಿರುವ ಅಂಶಗಳು ಸತ್ಯವಾಗಿದ್ದು, ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ. ನಾನು ಹಲವು ದಾಖಲೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಈಗ ನೋಡಿ ಗುರುತಿಸುತ್ತಿದ್ದೇನೆ.

ದಿಃ 21.03.2022 ರಂದು ಆದ ಆನ್ ಡಿಮ್ಯಾಂಡ್ ಪ್ರನೋಟನ್ನು ಹಾಜರುಪಡಿಸಿದ್ದು ಅದನ್ನು ನಿಪಿ 1 ಎಂದು, ಸಾಕ್ಷಿಯು ಪ್ರತಿವಾದಿ 2 ರವರ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ 1(ಎ) ಎಂದು, ಸಾಕ್ಷಿಯು ಪ್ರತಿವಾದಿ 1 ರವರ ಹೆಬ್ಬೆಟ್ಟಿನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಸಾಕ್ಷಿಯು ಸದರಿ ದಾಖಲಾತಿ ಯನ್ನು ತಯಾರಿಸಿದ ವೆಂಕಟರಮಣ ರವರ ಸಹಿಯನ್ನು ನೋಡಿ ಗುರತಿಸಿರುತ್ತಾರೆ. ಸಾಕ್ಷಿಯು ದಿಃ 06.02.2025 ರಂದು ವಕೀಲರ ಮೂಲಕ ಪ್ರತಿವಾದಿಗಳಿಗೆ ನೀಡಿದ ಕಛೇರಿ ಪ್ರತಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ 2 ಎಂದು, ನೋಟೀಸ್ ಕಳುಹಿಸಿದ ಬಗ್ಗೆ 2 ಅಂಚೇ ರಸೀದಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿಪಿ 3 ಎಂದು ಒಂದು ಸ್ವಿಕೃತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ 4 ಎಂದು, ನೋಟೀಸ್ ಜಾರಿಯಾದ ಬಗ್ಗೆ ಅಂಚೆ ಇಲಾಖೆಯರು ನೀಡಿದ್ದ ಹಿಂಬರಹವನ್ನು ಹಾಜರುಪಡಿಸಿದ್ದು ಅದನ್ನು ನಿಪಿ 5 ಎಂದು ಗುರುತಿಸಲಾಯಿತು.

ಪ್ರತಿವಾದಿ ಪರ ವಕೀಲರು ಗೈರು ಹಾಜರಿದ್ದು ನ್ಯಾಯದ ಹಿತ ದೃಷ್ಟಿಯಿಂದ ಪಾಟೀ ಸವಾಲಿಗೆ ಸಮಯ ನೀಡಲಾಯಿತು.

(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸಾ ಸ ಇ ಒ.,

ಹಿರಿಯ ಸಿ.ಜೆ ಮತ್ತು ಜೆ.ಎಂ.ಎಫ್.ಸಿ.,
ಹೆಚ್.ಡಿ.ಕೋಟೆ